| | |
|---|---|
| ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಮ್.ಎಫ್.ಸಿ ಜಮಖಂಡಿ. | |
| ಸಿ.ಸಿ.ನಂ.**34/2022** | |
| | ಚಾಸಾ-**2** |
| | ಪ್ರಾಸಾ-**3** |
| ಸಾಕ್ಷಿದಾರರ ಹೆಸರು | ಗುರುಲಿಂಗ ಹುಂಕಿ |
| ತಂದೆಯ ಹೆಸರು | ನಿಂಗಪ್ಪ |
| ವಯಸ್ಸು | **62** ವರ್ಷ |
| ಉದ್ಯೋಗ | ಒಕ್ಕಲುತನ |
| ವಾಸಸ್ಥಳ | ಹುನ್ನೂರು**,** ತಾಃ ಜಮಖಂಡಿ |

ದಿನಾಂಕ **09.09.2025** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

ಮುಖ್ಯ ವಿಚಾರಣೆಃ- ಸ.ಸ.ಅ ರವರಿಂದಃ-

1. ನನಗೆ ಚಾಸಾ-1 ರವರ ಪರಿಚಯವಿದೆ. ನನಗೆ ಆರೋಪಿತರ ಪರಿಚಯವಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಈಗ ಸಾಕ್ಷಿಗೆ ಸ.ಸ.ಅ. ರವರು ಸ್ಥಳ ಪಂಚನಾಮೆಯನ್ನು ತೋರಿಸಿದ್ದು, ಸಾಕ್ಷಿಯು ಅದರ ಮೇಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುವುದರಿಂದ, ಸದರಿ ದಾಖಲೆಯನ್ನು ನಿಪಿ-6 ಮತ್ತು ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು. ನಾನು ಪೋಲಿಸರ ಹೇಳಿಕೆಯ ಮೇರೆಗೆ ನಿಪಿ-6 ರ ಮೇಲೆ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಪೋಲಿಸರು ಯಾವುದೇ ಪಂಚನಾಮೆ ಮಾಡಿರುವುದಿಲ್ಲ.

**(**ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ**.** ಸದರಿ ಸಾಕ್ಷಿಯ ಸಾಕ್ಷ್ಯವನ್ನು ಪರಿಗಣಿಸಿ ಸ.ಸ.ಅ**.** ರವರಿಗೆ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು**.)**

ಪಾಟೀ ಸವಾಲುಃ- ಸ.ಸ.ಅ. ರವರಿಂದಃ-

1. ದಿನಾಂಕ 18.07.2021 ರಂದು ಸಂಜೆ 5.00 ರಿಂದ 6.00 ಗಂಟೆವರೆಗೆ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ಪೋಲಿಸರು ನನ್ನ ಹಾಗೂ ಮಹಾದೇವ ತಂದೆ ದುಂಡಪ್ಪ ಚಿಚಖಂಡಿ ಇವರ ಸಮಕ್ಷಮ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆ ಸಮಯದಲ್ಲಿ ಒಡೆದ ಗಾಜಿನ ಬಳೆಯ ಚೂರುಗಳು ಮತ್ತು ನೂಲಿನ ಹಗ್ಗವನ್ನು ನನ್ನ ಹಾಗೂ ಇನ್ನೊರ್ವ ಪಂಚನ ಸಮಕ್ಷಮ ಜಪ್ತಿಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆ ಸಮಯದಲ್ಲಿ ನಿಪಿ-2 ರಿಂದ ನಿಪಿ-5 ರಂತೆ ಫೋಟೋಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಈಗ ನಾನು ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿತರ ಪರ ಶ್ರೀ.ಎನ್ ಬಿ ಜಿ ವಕೀಲರಿಂದಃ-</u>

(ಆರೋಪಿತರ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ಹೇಳುತ್ತಾರೆ.)

<u>ಮರುವಿಚಾರಣೆಃ ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ ಅದೆ.

RAJASHEKHAR Digitally signed by RAJASHEKHAR Date: 2025.09.09 18:23:14 +0530

ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆ.ಎಮ್.ಎಫ್.ಸಿ. ಜಮಖಂಡಿ.

| | |
|---|---|
| ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಮ್.ಎಫ್.ಸಿ ಜಮಖಂಡಿ. | |
| ಸಿ.ಸಿ.ನಂ.**34/2022** | |
| | ಚಾಸಾ-**7** |
| | ಪ್ರಾಸಾ-**4** |
| ಸಾಕ್ಷಿದಾರರ ಹೆಸರು | ರಾಮಪ್ಪ ಅರಕೇರಿ |
| ತಂದೆಯ ಹೆಸರು | ಕಾಡಪ್ಪ |
| ವಯಸ್ಸು | **27** ವರ್ಷ |
| ಉದ್ಯೋಗ | ಒಕ್ಕಲುತನ |
| ವಾಸಸ್ಥಳ | ಹುನ್ನೂರು, ತಾಃ ಜಮಖಂಡಿ |

**ದಿನಾಂಕ 09.09.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ- ಸ.ಸ.ಅ ರವರಿಂದಃ-**

1. ನನಗೆ ಚಾಸಾ-1 ರಿಂದ 6 ಮತ್ತು 8 ರವರ ಪರಿಚಯವಿಲ್ಲ. ನನಗೆ ಆರೋಪಿತರ ಪರಿಚಯವಿದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೋಲಿಸರು ನನ್ನ ಹೇಳಿಕೆ ಪಡೆದಿರುವುದಿಲ್ಲ.

**(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಸದರಿ ಸಾಕ್ಷಿಯ ಸಾಕ್ಷ್ಯವನ್ನು ಪರಿಗಣಿಸಿ ಸ.ಸ.ಅ. ರವರಿಗೆ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ- ಸ.ಸ.ಅ. ರವರಿಂದಃ-**

1. ದಿನಾಂಕ 17.07.2021 ರಂದು ರಾತ್ರಿ 10.30 ಗಂಟೆ ಸುಮಾರಿಗೆ ಚಾಸಾ-1 ಮತ್ತು 3 ರವರೊಂದಿಗೆ ಆರೋಪಿತರು ಜಗಳ ಮಾಡಿ, 1 ರಿಂದ 10ನೇ ಆರೋಪಿತರು ಗುಂಪು ಕಟ್ಟಿಕೊಂಡು ಚಾಸಾ-1 ರವರ ಮನೆಯಲ್ಲಿ ದೊಂಬಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ರೀತಿಯಾಗಿ ಎಲ್ಲಾ ಆರೋಪಿತರು ಸೇರಿ ಚಾಸಾ-1 ರವರ ಮನೆಯ ಒಳಗೆ ಅತಿಕ್ರಮಣ ಪ್ರವೇಶ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ಆರೋಪಿತರು ಸೇರಿ ಚಾಸಾ-1, 3 ಮತ್ತು 4 ರವರಿಗೆ ತಮ್ಮ ಕೈಗಳಿಂದ ಹೊಡೆಬಡೆ ಮಾಡಿ ಮತ್ತು ಚಾಸಾ-4 ರವರಿಗೆ ಒದ್ದು ಗಾಯವುಂಟು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ಆರೋಪಿತರು ಸೇರಿ ಚಾಸಾ-5 ರವರನ್ನು ಅಕ್ರಮವಾಗಿ ಲೈಟಿನ ಕಂಬಕ್ಕೆ ಕಟ್ಟಿ ಪ್ರತಿಬಂಧಿಸಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ಆರೋಪಿತರು ಸೇರಿ ಚಾಸಾ-1 ಮತ್ತು 3 ರವರಿಗೆ ಅವಮಾನ ಮಾಡುವ ಉದ್ದೇಶದಿಂದ ಅವರನ್ನು ಎಳೆದಾಡಿ ಅಪರಾಧಿಕ ಬಲಪ್ರಯೋಗ ಮಾಡಿ ಅವಮಾನ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ಚಾಸಾ-1, 3 ಮತ್ತು 4 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಜೀವ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಘಟನೆಯ ಬಗ್ಗೆ ನನಗೆ ಮಾಹಿತಿ ಇದ್ದರೂ ಸಹಿತ, ನಾನು ಆರೋಪಿತರಿಗೆ

ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಈಗ ಸಾಕ್ಷಿಗೆ ಸ.ಸ.ಅ. ರವರು ದಂಡ ಪ್ರಕ್ರಿಯಾ ಸಂಹಿತೆ ಕಲಂ.161(3) ರ ಅಡಿಯಲ್ಲಿ ಪಡೆಯಲಾದ ಹೇಳಿಕೆಯನ್ನು ಓದಿ ಹೇಳಿದ್ದು, ಸಾಕ್ಷಿಯು ಅದನ್ನು ಅಲ್ಲಗಳೆದಿರುತ್ತಾರೆ. ಆದ್ದರಿಂದ ಸದರಿ ಹೇಳಿಕೆಯನ್ನು ನಿಪಿ-7 ಎಂದು ಗುರುತಿಸಲಾಯಿತು.

<u>ಪಾಟೀ ಸವಾಲು: ಆರೋಪಿತರ ಪರ ಶ್ರೀ.ಎನ್ ಬಿ ಜಿ ವಕೀಲರಿಂದ:-</u>

(ಆರೋಪಿತರ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ಹೇಳುತ್ತಾರೆ.)

<u>ಮರುವಿಚಾರಣೆ: ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ ಅದೆ.

RAJASHEKHAR

Digitally signed by RAJASHEKHAR
Date: 2025.09.09 18:23:22 +0530

ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆ.ಎಮ್.ಎಫ್.ಸಿ. ಜಮಖಂಡಿ.